I/598054/2024

ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

**DTE-ADMI0EST(10)/71/2023**

ಆಯುಕ್ತರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು, ದಿನಾಂಕ:20.04.2024

**ಸುತ್ತೋಲೆ**

**ವಿಷಯ:** ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಂಥಪಾಲಕರು/ದೈಹಿಕ ಶಿಕ್ಷಣ ಸಹಾಯಕ ನಿರ್ದೇಶಕರುಗಳಿಗೆ 6 ಮತ್ತು 7ನೇ ಎಐಸಿಟಿಇ ವೇತನ ಶ್ರೇಣಿಯಡಿ ವೃತ್ತಿ ಪದೋನ್ನತಿ ನೀಡುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಪತ್ರ ಸಂಖ್ಯೆ:ಇಡಿ/86/ಡಿಟಿಇ/2023 ದಿನಾಂಕ:07.10.2023.
2. ಸರ್ಕಾರದ ಪತ್ರ ಸಂಖ್ಯೆ:ಇಡಿ/89/ಡಿಟಿಇ/2023 ದಿನಾಂಕ:01.12.2023
3. ಈ ಕಛೇರಿ ಸಮ ಪತ್ರ ಸಂ: **DTE-ADMI0EST(10)/ 71/ 2023**

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಂಥಪಾಲಕರು/ದೈಹಿಕ ಶಿಕ್ಷಣ ಸಹಾಯಕ ನಿರ್ದೇಶಕರುಗಳಿಗೆ 7ನೇ ಎಐಸಿಟಿಇ ವೇತನ ಶ್ರೇಣಿಗೆ ಸಂಬಂಧಿಸಿದಂತೆ 2018ರ ಯು.ಜಿ.ಸಿ ಅಧಿಸೂಚನೆಯನ್ವಯ ಮತ್ತು ಕಾಲಕಾಲಕ್ಕೆ ಹೊರಡಿಸಿರುವ ಆದೇಶಗಳನ್ವಯ, ಪ್ರಸ್ತುತ 7ನೇ ವೇತನ ಶ್ರೇಣಿ ಜಾರಿಯಾದ ದಿನಾಂಕ: 01.03.2019 ರಿಂದ ಇಂದಿನವರೆಗೂ ವೃತ್ತಿ ಪದೋನ್ನತಿಗೆ ಅರ್ಹರಿರುವ ಗ್ರಂಥಪಾಲಕರು/ದೈಹಿಕ ಶಿಕ್ಷಣ ಸಹಾಯಕ ನಿರ್ದೇಶಕರುಗಳ ಪ್ರಸ್ತಾವನೆಗಳನ್ನು ಕೂಲಂಕುಷವಾಗಿ ಪರಿಶೀಲಿಸಿ, ಎಲ್ಲಾ ವಿದ್ಯಾರ್ಹತೆ ಮತ್ತು ಮಾನದಂಡಗಳನ್ನು ಪೂರೈಸಿದ್ದಲ್ಲಿ, ಪ್ರಮಾಣ ಪತ್ರಗಳ ನೈಜತೆಯ ಬಗ್ಗೆ ಖಚಿತಪಡಿಸಿಕೊಂಡು ಸಂಬಂಧಿತ ಪ್ರಾಂಶುಪಾಲರ ಮುಖಾಂತರ ಸರ್ಕಾರಿ ಎಸ್.ಕೆ.ಎಸ್.ಜೆ.ಟಿ. ಸಂಸ್ಥೆಯ ಪ್ರಾಂಶುಪಾಲರಿಗೆ ಪ್ರಸ್ತಾವನೆಗಳನ್ನು ಸಲ್ಲಿಸುವಂತೆ ಸೂಚಿಸಲಾಗಿದೆ. ವಿವಿಧ ಸಂಸ್ಥೆಗಳಿಂದ ಸ್ವೀಕೃತವಾಗಿರುವ 7ನೇ ಎಐಸಿಟಿಇ ವೇತನ ಶ್ರೇಣಿಯಲ್ಲಿ ಅರ್ಹರಿರುವ ಪ್ರಸ್ತಾವನೆಗಳನ್ನು ಪ್ರಾಂಶುಪಾಲರು, ಸರ್ಕಾರಿ ಎಸ್.ಕೆ.ಎಸ್.ಜೆ.ಟಿ ಸಂಸ್ಥೆ, ಇವರು ಸೂಚಿಸುವ ದಿನಾಂಕದಂದು ಆಯುಕ್ತಾಲಯಕ್ಕೆ ಹಾಜರಾಗಿ , ವೃತ್ತಿ ಪದೋನ್ನತಿಯ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ.

ಹಾಗೂ 6ನೇ ವೇತನ ಶ್ರೇಣಿಯಲ್ಲಿ 2010-2012ರ ಎಐಸಿಟಿಇ ಅಧಿಸೂಚನೆಯನ್ವಯ ನಿಯಮಾನುಸಾರ ವೃತ್ತಿ ಪದೋನ್ನತಿಗೆ ಅರ್ಹರಿದ್ದು, ಪ್ರಸ್ತುತ ಬಾಕಿಯಿರುವ ಎಲ್ಲಾ ಪ್ರಸ್ತಾವನೆಗಳನ್ನು ಸಂಬಂಧಪಟ್ಟ ಸಂಸ್ಥೆಯ ಪ್ರಾಂಶುಪಾಲರಿಗೆ ಸಲ್ಲಿಸಿ, ಸಂಸ್ಥೆಯ ಐ.ಕ್ಯೂ.ಐ.ಸಿ. ಸಮಿತಿಯಿಂದ ಪ್ರಸ್ತಾವನೆಯನ್ನು ಪರಿಶೀಲಿಸಿ, ಸೂಕ್ತ ಶಿಫಾರಸ್ಸಿನೊಂದಿಗೆ ಆಯುಕ್ತಾಲಯಕ್ಕೆ ದಿನಾಂಕ 21-05-2024 ರೊಳಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

Signed by
Prasanna H
Date: 24-04-2024 11:20:02

**ನಿರ್ದೇಶಕರು**

ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ,
1. ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಪ್ರಾಂಶುಪಾಲರಿಗೆ ಮುಂದಿನ ಕ್ರಮಕ್ಕಾಗಿ.

ಪ್ರತಿ:-
1. ಇ-ಆಡಳಿತ ವಿಭಾಗಕ್ಕೆ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು
2. ಕಛೇರಿ ಪ್ರತಿ.